# ಕರ್ನಾಟಕ ಸರ್ಕಾರದದ ನಡವಳಿಗಳು

ವಿಷಯ: 2017-18ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿ 25 ಹೊಸ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳನ್ನು ರೂ.200.00 ಕೋಟಿಗಳ ಅಂದಾಜು ಮೊತ್ತದಲ್ಲಿ ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ

ಓದಲಾಗಿದೆ: 1) 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿದೆ 103 ರಂತೆ
2) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಡಿಟಿಇ 01 ಡಿವಿಪಿ (1) 2017 ದಿನಾಂಕ 15.4.2017.

**ಪ್ರಸ್ತಾವನೆ:**

ಮೇಲೆ ಓದಲಾಗಿರುವ(2)ರ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಕರು 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಪ್ರಸ್ತಾಪಿಸಿದಂತೆ, ಗ್ರಾಮೀಣ ಹಿಂದುಳಿದ ಮತ್ತು ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳು ತಾಂತ್ರಿಕ ಶಿಕ್ಷಣ ಪಡೆಯುವುದಕ್ಕೆ ಉತ್ತೇಜನ ನೀಡಲು ರಾಜ್ಯಾದ್ಯಂತ ಗ್ರಾಮೀಣ ಪ್ರದೇಶಗಳ ತಲಾ ರೂ.4.00 ಕೋಟಿ ವೆಚ್ಚದಲ್ಲಿ 25 ಹೊಸ ಸರ್ಕಾರಿ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಪ್ರಸ್ತಾವನೆ ಸಲ್ಲಿಸಿ ಆಡಳಿತಾತ್ಮಕ ಅನುಮೋದನೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಗೆ 2017-18ನೇ ಸಾಲಿನ ಬಂಡವಾಳ ಲೆಕ್ಕ ಶೀರ್ಷಿಕೆ "4202-02-104-1-01" ಪಾಲಿಟೆಕ್ನಿಕ್ ಕಟ್ಟಡಗಳ ನಿರ್ಮಾಣ ಲೆಕ್ಕ ಶೀರ್ಷಿಕೆಯಡಿ ನಿಗದಿಯಾದ ಅನುದಾನದಲ್ಲಿ ರೂ. 3000.00 ಲಕ್ಷಗಳನ್ನು ಒದಗಿಸಿದ್ದು, ಹೊಸದಾಗಿ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಎ.ಐ.ಸಿ.ಟಿ.ಇ ರವರ ಮಾರ್ಗಸೂಚಿಯನ್ವಯ ಮೆಗಾ ಮತ್ತು ಮೆಟ್ರೋ ಸಿಟಿಯಲ್ಲಿ 1.5 ಎಕರೆ ನಗರ ಪ್ರದೇಶದಲ್ಲಿ 2.5 ಎಕರೆ ಹಾಗೂ ಗ್ರಾಮೀಣ ಪ್ರದೇಶದಲ್ಲಿ 4.00 ಎಕರೆ ಜಮೀನು ಹೊಂದಿರುವುದು ಅಗತ್ಯವೆಂದು ಹೇಳಲಾಗಿದೆ. ಮತ್ತು ಅಗತ್ಯ ಮೂಲಭೂತ ಸೌಕರ್ಯ ಒದಗಿಸಿದನಂತರ ಪಾಲಿಟೆಕ್ನಿಕ್ ಪ್ರಾರಂಭಿಸುವ ಪ್ರಸ್ತಾವನೆಯನ್ನು ಎ.ಐ.ಸಿ.ಟಿ.ಇ ಗೆ ಸಲ್ಲಿಸಬಹುದಾಗಿದೆ.

ಮುಂದುವರೆದು, ಒಂದು ಹೊಸ ಪಾಲಿಟೆಕ್ನಿಕ್ ಕಟ್ಟಡ ನಿರ್ಮಿಸಲು ರೂ..800.00 ಲಕ್ಷಗಳ ಅವಶ್ಯಕತೆಯಿದ್ದು 2017-18ನೇ ಸಾಲಿನ ಆಯವ್ಯಯದಲ್ಲಿ ಮೊದಲ ಹಂತದ ಕಟ್ಟ ಡವನ್ನು ನಿರ್ಮಾಣ ಮಾಡಬಹುದಾಗಿದ್ದು, ಕಟ್ಟಡ ನಿರ್ಮಾಣ ಪೂರ್ಣಗೊಂಡ ಕೂಡಲೇ ಪಾಲಿಟೆಕ್ನಿಕ್‌ಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳಾದ ಯಂತ್ರೋಪಕರಣ, ಪೀಠೋಪಕರಣ ಮತ್ತು ಗ್ರಂಥಾಲಯಕ್ಕೆ ಬೇಕಾಗಿರುವ ಪುಸ್ತಕಗಳು ಹಾಗೂ ಭೋದಕ/ಬೋಧಕೇತರ ಹುದ್ದೆಗಳನ್ನು ಸೃಜಿಸಬೇಕಾಗುತ್ತದೆಯೆಂದು ಪ್ರಸ್ತಾವನೆಯಲ್ಲಿ ಹೇಳಿದ್ದಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ. ಇಡಿ 75 ಹೆಚ್‌ಪಿಯು 2017, ಬೆಂಗಳೂರು, ದಿನಾಂಕ: 09-6-2017**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ 2017-18ನೇ ಸಾಲಿನಲ್ಲಿ ಗ್ರಾಮೀಣ, ಹಿಂದುಳಿದ ಮತ್ತು ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳು ತಾಂತ್ರಿಕ ಶಿಕ್ಷಣ ಪಡೆಯುವುದಕ್ಕೆ ಉತ್ತೇಜನ ನೀಡಲು

ಗ್ರಾಮೀಣ ಪ್ರದೇಶದಲ್ಲಿ ಹೊಸದಾಗಿ 25 ಹೊಸ ಸರ್ಕಾರಿ ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಈ ಕೆಳಕಂಡ ಷರತ್ತಿ ಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿದೆ.

1) 25 ಹೊಸ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳನ್ನು ಪ್ರತಿ ಪಾಲಿಟೆಕ್ನಿಕ್‌ಗೆ ರೂ.800.00 ಲಕ್ಷಗಳಂತೆ, ಅಂದಾಜು ರೂ.20000.00 ಲಕ್ಷಗಳ ವೆಚ್ಚದಲ್ಲಿ ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಿದೆ.
2) 25 ಹೊಸ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಯಂತ್ರೋಪಕರಣಗಳು, ಪೀಠೋಪಕರಣಗಳು, ಮತ್ತು ಗ್ರಂಥಾಲಯಕ್ಕೆ ಅವಶ್ಯಕವಾಗಿ ಬೇಕಾಗುವ ಪುಸ್ತಕಗಳ ಖರೀದಿಗಾಗಿ ರೂ.6500.00 ಲಕ್ಷಗಳ ಅನುದಾನಕ್ಕಾಗಿ ಪ್ರತ್ಯೇಕ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.
3) ವೇತನ ಮತ್ತು ವೇತನೇತರ ವೆಚ್ಚವನ್ನು ಆವರ್ತಕ ವೆಚ್ಚದಿಂದ ಭರಿಸಲು ಅನುಮೋದಿಸಿದೆ. ಇದಕ್ಕಾಗಿ ಪ್ರತ್ಯೇಕ ಪ್ರಸ್ತಾವನೆಯನ್ನು ಸಲ್ಲಿಸತಕ್ಕದ್ದು.
4) ಪ್ರತಿ ಕೋರ್ಸಿಗೆ ಕನಿಷ್ಠ 60 ವಿದ್ಯಾರ್ಥಿಗಳ ಪ್ರವೇಶಕ್ಕೆ ಅವಕಾಶ ಕಲ್ಪಿಸಿಕೊಳ್ಳಲು ಅನುಮತಿಸಿದೆ.
5) ಹೊಸದಾಗಿ ಪ್ರಾರಂಭಿಸಲಾಗುತ್ತಿರುವ ಪಾಲಿಟೆಕ್ನಿಕ್‌ಗಳಲ್ಲಿ ಈ ಕೆಳಗಿನ ಐದು ಕೋರ್ಸುಗಳಲ್ಲಿ ಯಾವುದಾದರೂ ನಾಲ್ಕು ಕೋರ್ಸುಗಳೊಂದಿಗೆ ಪಾಲಿಟೆಕ್ನಿಕ್ ಪ್ರಾರಂಭಿಸಬಹುದಾಗಿದೆ.
   ಅ) ಸಿವಿಲ್ ಇಂಜಿನಿಯರಿಂಗ್
   ಆ) ಮೆಕ್ಯಾನಿಕಲ್ ಇಂಜಿನಿಯರಿಂಗ್
   ಇ) ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯೂನಿಕೇಷನ್ ಇಂಜಿನಿಯರಿಂಗ್
   ಈ) ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್
   ಉ) ಆಟೋಮೊಬೈಲ್ ಇಂಜಿನಿಯರಿಂಗ್
6) 2017-18ನೇ ಸಾಲಿನ ಬಂಡವಾಳ ಲೆಕ್ಕ ಶೀರ್ಷಿಕೆ 4202-02-104-1-01 ಪಾಲಿಟೆಕ್ನಿಕ್ ಕಟ್ಟಡಗಳ ನಿರ್ಮಾಣದಡಿ ನಿಗದಿಯಾದ ಅನುದಾನದಿಂದ ರೂ.3000.00 ಲಕ್ಷಗಳನ್ನು ಉಪಯೋಗಿಸಿಕೊಳ್ಳಲು ಅನುಮೋದನೆ ನೀಡಿದೆ.
7) 2018-19 ಮತ್ತು 2019-20ನೇ ಸಾಲಿನಲ್ಲಿ ರೂ.17000.00 ಲಕ್ಷಗಳನ್ನು ಕಟ್ಟಡಗಳ ಪ್ರಗತಿಯನ್ನು ಆಧರಿಸಿ ಆಯವ್ಯಯದಲ್ಲಿ ಅನುದಾನವನ್ನು ಏರ್ಪಾಟುಮಾಡಿಕೊಳ್ಳಲು ತಾಂತ್ರಿಕ ಶಿಕ್ಷಣ ಇಲಾಖೆಯು ಕ್ರಮ ಕೈಗೊಳ್ಳತಕ್ಕದ್ದು.
8) ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಲಾಗಿರುವ ಪಾಲಿಟೆಕ್ನಿಕ್‌ಗಳ ಪಟ್ಟಿಯನ್ನು ಪ್ರತ್ಯೇಕವಾಗಿ ಆದೇಶದ ಮೂಲಕ ಹೊರಡಿಸಲಾಗುವುದು.
9) All India Council for Technical Education, ನವದೆಹಲಿ ರವರ ಮಾರ್ಗಸೂಚಿಯಂತೆ ಪ್ರಸ್ತುತ ಪ್ರಾರಂಭಿಸುತ್ತಿರುವ ಪಾಲಿಟೆಕ್ನಿಕ್‌ಗಳು ಕಡ್ಡಾಯವಾಗಿ 4.00 ಎಕರೆ ಜಮೀನು ಹೊಂದಿರುವುದನ್ನು ಖಚಿತಪಡಿಸಿಕೊಂಡು ನಂತರ ಎಲ್ಲಾ ವಿಧದಿಂದಲೂ ಪಾಲಿಟೆಕ್ನಿಕ್ ಪ್ರಾರಂಭಿಸಲು ಪ್ರಶಸ್ತವಾಗಿದೆಯೆಂಬುದನ್ನು ಮನಗಂಡು ಕಟ್ಟಡ ಕಾಮಗಾರಿ ಪ್ರಾರಂಭಿಸಲು ಕ್ರಮಕೈಗೊಳ್ಳಬೇಕು.
10) ಪ್ರತಿ ಪಾಲಿಟೆಕ್ನಿಕ್ ಕಟ್ಟಡಗಳ ಕಾಮಗಾರಿ ಪ್ರಾರಂಭಿಸುವ ಮೊದಲು ಕಟ್ಟಡದ ನಕ್ಷೆ/ನೀಲಿನಕಾಶೆ ಹಾಗೂ ವಿವರವಾದ ಅಂದಾಜುಪಟ್ಟಿ ಸಲ್ಲಿಸಿ ಸರ್ಕಾರದ ಅನುಮೋದನೆ ಪಡೆಯಬೇಕು.

11) ಕಟ್ಟಡ ಕಾಮಗಾರಿಗಳನ್ನು ಗುತ್ತಿಗೆದಾರರಿಗೆ ವಹಿಸುವ ಮೊದಲು ಕೆ.ಟಿ.ಪಿ.ಪಿ ಅಧಿನಿಯಮ 1999 ಮತ್ತು ಅಧ್ಯಾದೇಶ- 2000ರಲ್ಲಿ ಹೇಳಿರುವ ಎಲ್ಲಾ ನಿಯಮಗಳನ್ನು ಇಲಾಖೆಯು ತಪ್ಪದೇ ಪಾಲಿಸಬೇಕು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ. ಆಇ 301 ವೆಚ್ಚ-8/2017 ದಿನಾಂಕ 26.4.2017 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಅಪರ್ಣಾ ಪಾವಟೆ)
ಸರ್ಕಾರದ ಉಪ ಕಾರ್ಯದರ್ಶಿ (ಯೋಜನೆ)
ಉನ್ನತ ಶಿಕ್ಷಣ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, ಕರ್ನಾಟಕ (ಆಡಿಟ್ 1 ಮತ್ತು 2) ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ).
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಉನ್ನತ ಶಿಕ್ಷಣ) ಶಿಕ್ಷಣ ಇಲಾಖೆ ಅವರ ಆಪ್ತ ಕಾರ್ಯದರ್ಶಿಗಳು.
6. ನಿರ್ದೇಶಕರು, ಪಿ.ಎಂ.ಐ. ವಿಭಾಗ, ಯೋಜನಾ ಇಲಾಖೆ, ಬೆಂಗಳೂರು.
7. ಸಮನ್ವಯಾಧಿಕಾರಿ, ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿ, ತಾಂತ್ರಿಕ ಮತ್ತು ಕಾಲೇಜು ಶಿಕ್ಷಣ.
9. ಸರ್ಕಾರದ ಅಧೀನ ಕಾರ್ಯದರ್ಶಿ, ತಾಂತ್ರಿಕ ಶಿಕ್ಷಣ ಶಾಖೆ.
10. ಹೆಚ್ಚುವರಿ ಪ್ರತಿಗಳು.

Administration ha Approved the proposal for a sum of Rs 200.00 Lakhs at 25 New Govt polytechnic Colleges in State as Announced by the 2017-18 Budget Go.